# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 985 |
| ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ |
| ಉತ್ತರಿಸುವ ದಿನಾಂಕ | 20.08.2025 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಎ ಮತ್ತು ಬಿ ದರ್ಜೆಯ ದೇವಸ್ಥಾನಗಳ ಸಂಖ್ಯೆ ಎಷ್ಟು; ಈ ದೇವಸ್ಥಾನಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; | ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 34,566 ದೇವಾಲಯಗಳಿವೆ. ಅವುಗಳನ್ನು ಪ್ರವರ್ಗ 'ಎ' 'ಬಿ' ಮತ್ತು 'ಸಿ' ವರ್ಗದ ದೇವಾಲಯಗಳೆಂದು ವರ್ಗೀಕರಿಸಲಾಗಿದೆ. ಅವುಗಳ ಸಂಖ್ಯೆಯು ಈ ಕೆಳಕಂಡಂತಿದೆ:-<br><br>ಕ್ರ ಸಂ / ಪ್ರವರ್ಗ / ಸಂಖ್ಯೆ<br>1 / ಎ / 205<br>2 / ಬಿ / 193<br>3 / ಸಿ / 34,168<br>**ಒಟ್ಟು** / **34,566**<br><br>ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ಸಂಸ್ಥೆಗಳಿಗೆ ಬರುವ ಭಕ್ತಾಧಿಗಳಿಗೆ/ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಛೇರಿಯ ಸುತ್ತೋಲೆ ಸಂಖ್ಯೆ:ಸಿಎನ್ಆರ್/1/ಸಿಆರ್/346/2010-11, ದಿನಾಂಕ:22.03.2011 ರಲ್ಲಿ 32 ಅಂಶಗಳನ್ನು ಒಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ ಹಾಗೂ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಸಹ ಒದಗಿಸಲಾಗಿರುತ್ತದೆ.<br><br>1. ದೇವಾಲಯದಲ್ಲಿ ಮಾರ್ಗದರ್ಶನ ಫಲಕಗಳನ್ನು ಅಳವಡಿಸಲಾಗಿರುತ್ತದೆ.<br>2. ದೇವಾಲಯಕ್ಕೆ ಭೇಟಿ ನೀಡುವ ಹಿರಿಯ ನಾಗರೀಕರು ಮತ್ತು ಕುಟುಂಬಗಳು ವಿಶ್ರಮಿಸಲು ಆಸನದ ವ್ಯವಸ್ಥೆ.<br>3. ದೇವಾಲಯಕ್ಕೆ ಬರುವ ಭಕ್ತಾಧಿಗಳಿಗೆ ನೆರಳಿನ ವ್ಯವಸ್ಥೆ.<br>4. ದೇವಾಲಯಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ (RO Plant),<br>5. ಶೌಚಾಲಯಗಳ ವ್ಯವಸ್ಥೆ. |

| ಪ್ರಶ್ನೆ | | ಉತ್ತರ |
|---|---|---|
| | | 6. ದೇವಾಲಯಗಳಲಿ CC TV ಗಳ ವ್ಯವಸ್ಥೆ.<br>7. ವಿಶೇಷ ಚೇತನರು ಹಾಗೂ ಹಿರಿಯ ನಾಗರೀಕರಿಗೆ ಪ್ರತ್ಯೇಕ ಸರದಿ ಸಾಲಿನಲ್ಲಿ ನೇರ ದರ್ಶನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.<br>8. ಪ್ರವರ್ಗ 'ಎ' ಮತ್ತು 'ಬಿ' ದೇವಾಲಯಗಳಲ್ಲಿ ತಾಯಂದಿರು ಹಾಲುಣಿಸಲು ಪ್ರತ್ಯೇಕ ಕೊಠಡಿ ವ್ಯವಸ್ಥೆ ಹಾಗೂ ಒಂದು ವರ್ಷದೊಳಗಿನ ಚಿಕ್ಕ ಮಕ್ಕಳಿರುವ ತಾಯಂದಿರಿಗೆ ನೇರ ದರ್ಶನದ ವ್ಯವಸ್ಥೆ.<br>9. ದೇವಾಲಯಗಳ ಸ್ವಚ್ಛತೆ ಮತ್ತು ಕ್ಷೇತ್ರದ ಪಾವಿತ್ರತೆಯನ್ನು ಕಾಪಾಡುವ ನಿಟ್ಟಿನಲ್ಲಿ 2025ನೇ ಆಗಸ್ಟ್ 15 ತಾರೀಖಿನಿಂದ ಅನ್ವಯವಾಗುವಂತೆ ಸಂಪೂರ್ಣವಾಗಿ ಪ್ಲಾಸ್ಟಿಕ್ ನಿಷೇಧವನ್ನು ಜಾರಿಗೆ ತರಲು ಇಲಾಖೆಯ ಎಲ್ಲಾ ದೇವಾಲಯಗಳಿಗೆ ಸುತ್ತೋಲೆ ಮೂಲಕ ಸೂಚನೆ ನೀಡಲಾಗಿದೆ. |
| ಆ) | ಈ ದೇವಸ್ಥಾನಗಳ ಅರ್ಚಕರಿಗೆ ವೇತನ ಪಾವತಿಯಲ್ಲಿ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ದೇವಸ್ಥಾನಗಳ ಅರ್ಚಕರಿಗೆ ವೇತನ ಪಾವತಿಯಲ್ಲಿ ತಾರತಮ್ಯವಾಗಿರುವುದು ಗಮನಕ್ಕೆ ಬಂದಿರುತ್ತದೆ. |
| ಇ) | ವೇತನ ತಾರತಮ್ಯ ಹೋಗಲಾಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ? | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ನಿಯಮಗಳು 2019ರ ನಿಯಮ 8ರ ಕೋಷ್ಟಕದಲ್ಲಿನ ವೇತನ ಶ್ರೇಣಿ ಮತ್ತು ಇತರ ಭತ್ಯೆಗಳನ್ನು ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ದೇವಾಲಯದ ಅರ್ಚಕರು/ನೌಕರರು ತಮಗೂ ಸಹ ಸರ್ಕಾರಿ ವೇತನ ಶ್ರೇಣಿ ನಿಗಧಿಪಡಿಸುವಂತೆ ಬೇಡಿಕೆ ಸಲ್ಲಿಸಿರುವ ಕಾರಣದಿಂದ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:25.02.2025 ರಂದು ನಡೆದ ಸಭೆಯಲ್ಲಿ ದೇವಾಲಯದ ಅರ್ಚಕರು/ನೌಕರರ ವೇತನ ತಾರತಮ್ಯವನ್ನು ಸರಿಪಡಿಸಲು ಸುದೀರ್ಘವಾಗಿ ಚರ್ಚಿಸಿ ನಿವೃತ್ತ ನ್ಯಾಯಾಧೀಶರನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸಿ, ವೇತನ ತಾರತಮ್ಯವನ್ನು ಸರಿಪಡಿಸುವ ಬಗ್ಗೆ ಆಮೂಲಾಗ್ರವಾಗಿ ಪರಿಶೀಲಿಸಿ, ವರದಿ ಪಡೆದು ವೇತನ ತಾರತಮ್ಯವನ್ನು ಸರಿಪಡಿಸಲು ಕ್ರಮ ವಹಿಸುವಂತೆ ಸೂಚನೆ ನೀಡಲಾಗಿರುತ್ತದೆ. |

| ಪ್ರಶ್ನೆ | ಉತ್ತರ |
| --- | --- |
| | ಧಾರ್ಮಿಕ ದತ್ತಿ ಇಲಾಖೆಯ ದೇವಾಲಯದ ನೌಕರರಿಗೆ "ಸಮಾನ ಕೆಲಸ ಸಮಾನ ವೇತನ" ತತ್ವದಡಿಯಲ್ಲಿ ವೇತನ ಪರಿಷ್ಕರಿಸುವ ಕುರಿತು ಪರಿಶೀಲಿಸಲು ನಿವೃತ್ತ ನ್ಯಾಯಾಧೀಶರೊಬ್ಬರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ 03 ತಿಂಗಳೊಳಗಾಗಿ ವರದಿಯನ್ನು ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಕಂಇ 04 ಮುಸೇವಿ 2023, ದಿನಾಂಕ:18.03.2025ರಲ್ಲಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ. ಅದರಂತೆ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳನ್ನು ಒಳಗೊಂಡಂತೆ "ವೇತನ ಸಮಿತಿ" ರಚಿಸಲಾಗಿದ್ದು, ಸದರಿ ವೇತನ ಸಮಿತಿಯು ನೀಡಲಿರುವ ವರದಿಯನ್ವಯ ನಿಯಮಾನುಸಾರ ಪರಿಶೀಲಿಸಿ ವೇತನ ತಾರತಮ್ಯವನ್ನು ಸರಿಪಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಕಂಇ 173 ಮುಸಪ್ರ 2025

(ರಾಮಲಿಂಗಾರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು